ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಮಿತಿ (ಸಾರ್ವಜನಿಕ ಲೆಕ್ಕ ಪತ್ರಗಳ ಸಮಿತಿ)

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 30/12/2017

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಹಾಯಕ ಅಮಾನತು

ಬೆಂಗಳೂರು: ಸರ್ಕಾರಿ ಹುದ್ದೆಗೆ ಗೌರವ ತರುವ ರೀತಿಯಲ್ಲಿ ವರ್ತಿಸಿದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಹಾಯಕ ಬಿ.ಆರ್. ರಂಗಪ್ಪ ಅವರನ್ನು ಕರ್ನಾಟಕ ನಾಗರಿಕ ಸೇವಾ ನಿಯಮಗಳ ಅನುಸಾರ ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತುಗೊಳಿಸಿ ಸರ್ಕಾರ ಆದೇಶಿಸಿದೆ.

ಸಾರ್ವಜನಿಕ ಲೆಕ್ಕ ಪತ್ರಗಳ ಸಮಿತಿಯು ನಗರಾಭಿವೃದ್ಧಿ ಇಲಾಖೆಗೆ ಸಂಬಂಧಿಸಿದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಮ್ಯೂಚುವಲ್ ಫಂಡ್‌ಗಳಲ್ಲಿ ಮಾಡಿದ ಹೂಡಿಕೆ ಕುರಿತಂತೆ ಚರ್ಚಿಸಲು ಡಿ.17ರಂದು ವಿಧಾನಸೌಧದಲ್ಲಿ ಸಭೆ ನಿಗದಿಯಾಗಿತ್ತು. ಸಭೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ಹಾಜರಾಗುವಂತೆ ಸೂಚಿಸಲಾಗಿತ್ತು. ಸಭೆ ಕುರಿತಂತೆ ಇಲಾಖೆಯ ಸಹಾಯಕ ಬಿ.ಆರ್.ರಂಗಪ್ಪ ಡಿ.16ರಂದು ಸಭಾ ಸ್ವೀಕೃತಿ ಸ್ವೀಕರಿಸಿದ್ದು ಅದನ್ನು ಸಂಬಂಧಪಟ್ಟ ಶಾಖೆಗೆ ನಿಗದಿತ ಅವಧಿಯಲ್ಲಿ ನೀಡದೇ ನಿರ್ಲಕ್ಷ್ಯ ವಹಿಸಿದ್ದಾರೆ. ಆದ್ದರಿಂದ ಸಭೆಯನ್ನು 24ಕ್ಕೆ ಮುಂದೂಡಲಾಗಿದ್ದು ಹಿಂದಿನ ಸಭೆಗೆ ಹಾಜರಾಗದಿರುವ ಬಗ್ಗೆ ಸಮಿತಿಯು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳನ್ನು ಪ್ರಶ್ನಿಸಲಾಗಿದೆ. ಈ ಬಗ್ಗೆ ಗಮನಕ್ಕೆ ಬಂದಿಲ್ಲವೆಂದು ಕಾರ್ಯದರ್ಶಿ ತಿಳಿಸಿದ್ದು ಸ್ವೀಕೃತಿಯನ್ನು ಸಭೆ ಮುಂದಿಡಲಾಗಿದೆ. ಇದರಿಂದ ಸಹಾಯಕ ಬಿ.ಆರ್.ರಂಗಪ್ಪನ ನಿರ್ಲಕ್ಷ್ಯ ಕಂಡುಬಂದಿದೆ. ಆದ್ದರಿಂದ ಅಧಿಕಾರಿಯನ್ನು ಅಮಾನತುಗೊಳಿಸಲಾಗಿದೆ.